# JUNE 26, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

- ರಾಜ್ಯದ ಹಲವೆಡೆ ಭಾರಿ ಮಳೆ: ಕೆಲವೆಡೆ ಪ್ರವಾಹ ಭೀತಿ: ಎಡಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತ.

- 'ಕಾವೇರಿ ಆರತಿ'ಗೆ ಸಂಬಂಧಿಸಿದಂತೆ, ರೈತರು, ವಿವಿಧ ಭಾಗಿದಾರರೊಂದಿಗೆ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಭೆ.

- ಚಿಕ್ಕಬಳ್ಳಾಪುರ ಜಿಲ್ಲಾ ಕ್ರೀಡಾಂಗಣದ ಸಮಗ್ರ ಅಭಿವೃದ್ಧಿಗೆ 69 ಕೋಟಿ ರೂಪಾಯಿ ಪ್ರಸ್ತಾವನೆ– ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್

- ತುರ್ತು ಪರಿಸ್ಥಿತಿ ಹೇರಲ್ಪಟ್ಟು ಐವತ್ತು ವರ್ಷಗಳು ಪೂರೈಸಿದ ಹಿನ್ನೆಲೆ– ದೇಶಾದ್ಯಂತ ನಿನ್ನೆ ಸಂವಿಧಾನ ಹತ್ಯಾ ದಿವಸ್ ಆಚರಣೆ.

ಈಗ ವಾರ್ತೆಗಳ ವಿವರ

*******

ಕಳೆದೆರಡು ದಿನಗಳಿಂದ ರಾಜ್ಯದ ಹಲವೆಡೆ ಭಾರಿ ಮಳೆಯಾಗುತ್ತಿದ್ದು, ಕೆಲವೆಡೆ ಪ್ರವಾಹ ಭೀತಿ ಎದುರಾಗಿದೆ. ಎಡಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಮಂಡ್ಯ– ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿರುವ ಪರಿಣಾಮ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಕೃಷ್ಣರಾಜ ಸಾಗರ ಅಣೆಕಟ್ಟೆ ಭರ್ತಿಯಾಗಿ ಆ ವ್ಯಾಪ್ತಿಯಲ್ಲಿ ಪ್ರವಾಹ ಭೀತಿ ಎದುರಾಗಿದೆ. ನಿನ್ನೆ ಅಣೆಕಟ್ಟೆಯಿಂದ ನದಿಗೆ ಸುಮಾರು 30 ರಿಂದ 50 ಸಾವಿರ ಕ್ಯೂಸೆಕ್ ನೀರು ಬಿಡಲಾಗಿದ್ದು, ನದಿ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಕೃಷ್ಣರಾಜ ಸಾಗರದ ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಇಂಜಿನಿಯರ್ ಕಚೇರಿಯ ಪ್ರಕಟಣೆ ತಿಳಿಸಿದೆ. ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಶಿವನಸಮುದ್ರದ ಗಗನಚುಕ್ಕಿ ಜಲಪಾತ ತುಂಬಿ ಭೋರ್ಗರೆಯುತ್ತಿದೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡೆ ಧಾರಾಕಾರ ಮಳೆಯಾಗುತ್ತಿದ್ದು, ಬಾರೀ ಮಳೆ ಮತ್ತು ಗಾಳಿಯಿಂದ ಜನಜೀವನ ಅಸ್ತವ್ಯಸ್ತವಾಗಿದೆ. ಜಿಲ್ಲೆಯಲ್ಲಿ ರೆಡ್ ಅಲರ್ಟ ಘೋಷಣೆಯಾಗಿದೆ. ಹಾರಂಗಿ ಜಲಾಶಯಕ್ಕೆ ಭಾರೀ ಪ್ರಮಾಣದಲ್ಲಿ ನೀರು ಹರಿದು ಬರುತ್ತಿರುವ ಹಿನ್ನಲೆ, ನಿನ್ನೆ ಸಂಜೆ

ಜಲಾಶಯದಿಂದ 10 ಸಾವಿರ ಕ್ಯೂಸೆಕ್ ನೀರು ಹೊರಬಿಡಲಾಗಿದೆ. ಮಳೆ ಹಾನಿ ಪ್ರದೇಶಗಳಿಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು. ಬೆಳಗಾವಿ ಜಿಲ್ಲೆಯಲ್ಲೂ ನಿರಂತರ ಭಾರೀ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದ್ದು, ಕೆಳಹಂತದ ಸೇತುವೆಗಳು ಮುಳಗಡೆಯಾಗಿವೆ. ಕಳೆದ ಒಂದು ವಾರದಿಂದ ಸುರಿಯುತ್ತಿರುವ ಭಾರೀ ಮಳೆ ಹಾಗೂ ಮಹಾರಾಷ್ಟ್ರದ ಘಟ್ಟಪ್ರದೇಶದಲ್ಲಿ ಸುರಿಯುತ್ತಿರುವ ನಿರಂತರ ಮಳೆಯಿಂದಾಗಿ ಬೆಳಗಾವಿ ತಾಲೂಕು ಸೇರಿದಂತೆ ಖಾನಾಪೂರ, ಚಿಕ್ಕೋಡಿ ವಿಭಾಗದ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಕೃಷ್ಣಾ ನದಿ ಸೇರಿದಂತೆ ಅದರ ಉಪ ನದಿಗಳಾದ ಮಲಪ್ರಭಾ, ಘಟಪ್ರಭಾ, ವೇದಗಂಗಾ, ದೂಧಗಂಗಾ, ಪಂಚಗಂಗಾ, ಹಿರಣ್ಯಕೇಶಿ, ಮಾರ್ಕಂಡೆಯ ನದಿಗಳು ತುಂಬಿ ಹರಿಯುತ್ತಿವೆ. ಪರಿಣಾಮವಾಗಿ ಚಿಕ್ಕೋಡಿ ವಿಭಾಗದ 11 ಕೆಳಹಂತದ ಸೇತುವೆಗಳು ಜಲಾವೃತಗೊಂಡಿವೆ. ಮಲಪ್ರಭಾ ನದಿ ಸೇರುವ ಖಾನಾಪೂರ  ಗೋವಾ ರಾಜ್ಯ ಹೆದ್ದಾರಿ ಮಾರ್ಗಮಧ್ಯದ ಹಾಲಾತ್ರಿ ಹಳ್ಳ ತುಂಬಿ ಹರಿಯುತ್ತಿರುವುದರಿಂದ ನೆರಸೆ, ಮಂತುರ್ಗಾ, ಅಶೋಕನಗರ, ಗವಳಿವಾಡ, ಹೆಮ್ಮಡಗಾ ಸೇರಿದಂತೆ 15ಕ್ಕೂ ಅಧಿಕ ಗ್ರಾಮಗಳ ಸಂಪರ್ಕ ಕಡಿತಗೊಂಡಿದೆ. ಮಳೆಯಿಂದಾಗಿ ಕುಸುಮನಾಳ ಸೇತುವೆ ಕುಸಿದ ಪರಿಣಾಮ ಜಾಂಬೋಟಿ ಮಾರ್ಗದ ಗೋವಾ ಸಾರಿಗೆ ಸಂಪರ್ಕ ಕಳೆದ ಒಂದು ವಾರದಿಂದ ಸ್ಥಗಿತಗೊಂಡಿದೆ. ಜಿಲ್ಲೆಯಲ್ಲಿ ಮಳೆ ಮುಂದುವರಿದ ಹಿನ್ನೆಲೆ, ಇಂದು ಬೆಳಗಾವಿ, ಖಾನಾಪುರ ಮತ್ತು ಕಿತ್ತೂರು ತಾಲ್ಲೂಕಿನ ಅಂಗನವಾಡಿ ಕೇಂದ್ರಗಳು, ಸರಕಾರಿ, ಅನುದಾನಿತ ಹಾಗೂ ಅನುದಾನರಹಿತ ಪ್ರಾಥಮಿಕ ಶಾಲೆ, ಪ್ರೌಢಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಮೊಹಮ್ಮದ್ ರೋ  ’ನ್ ಆದೇಶ ಹೊರಡಿಸಿದ್ದಾರೆ. .

*******

ಮಂಡ್ಯ ಜಿಲ್ಲೆಯ ಕೆ.ಆರ್.ಎಸ್.ಉದ್ಯಾನದಲ್ಲಿ ಆಯೋಜಿಸಲು ಉದ್ದೇಶಿಸಿರುವ, ‘ಕಾವೇರಿ ಆರತಿ’ಗೆ ಸಂಬಂಧಿಸಿದಂತೆ, ಸ್ಥಳೀಯ ರೈತರು, ಅಧಿಕಾರಿಗಳು ಹಾಗೂ ವಿವಿಧ ಭಾಗಿದಾರರೊಂದಿಗೆ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬೆಂಗಳೂರಿನಲ್ಲಿ ನಿನ್ನೆ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ಕಾವೇರಿ ಆರತಿಯಿಂದ ಕಾವೇರಿ ಜಲಾನಯನ ಪ್ರದೇಶದ ರೈತರಿಗೆ ಅನುಕೂಲವಾಗಲಿದೆ. ಕಾರ್ಯಕ್ರಮ ಆಯೋಜಿಸುವುದರಿಂದ ಜಲಾಶಯಕ್ಕೆ ಯಾವುದೇ ತೊಂದರೆಯಾಗುವುದಿಲ್ಲ. ಸಂಸ್ಕೃತಿಗಳ ಅನಾವರಣ, ಸಾವಿರಾರು ಉದ್ಯೋಗಗಳ ಸೃಷ್ಟಿ, ಪ್ರವಾಸೋದ್ಯಮ ಅಭಿವೃದ್ಧಿ ಹಾಗೂ ವ್ಯಾಪಾರ ವಹಿವಾಟಿಗೆ ಇದು ಪೂರಕವಾಗಲಿದೆ ಎಂದರು. ಈಗಾಗಲೇ ಅಧ್ಯಯನ ತಂಡವೊಂದು ಉತ್ತರ ಭಾರತ ಪ್ರವಾಸ ಮಾಡಿ, ‘ಗಂಗಾ ಆರತಿ’ ವೀಕ್ಷಿಸಿ, ವರದಿಯನ್ನು ನೀಡಿದೆ. ಅದರಂತೆ, ‘ಕಾವೇರಿ ಆರತಿ’ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

*******

ಚಿಕ್ಕಬಳ್ಳಾಪುರ ಜಿಲ್ಲಾ ಕ್ರೀಡಾಂಗಣದ ಸಮಗ್ರ ಅಭಿವೃದ್ಧಿಗೆ 69 ಕೋಟಿ ರೂಪಾಯಿಗಳ ಯೋಜನಾ ವರದಿ ಮತ್ತು ವಿನ್ಯಾಸ ಸಿದ್ದಪಡಿಸಿ, ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದಲ್ಲಿಂದು ನಡೆದ ಜಿಲ್ಲೆಯ ಕ್ರೀಡಾಂಗಣಗಳ ಅಭಿವೃದ್ಧಿ ಕುರಿತಾದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮೊದಲ ಹಂತದಲ್ಲಿ 10 ಕೋಟಿ ರೂಪಾಯಿ ಮಂಜೂರಾಗಿದ್ದು, ಆಡಳಿತಾತ್ಮಕ ಅನುಮೋದನೆಯ ಹಂತದಲ್ಲಿ ಬಾಕಿಯಿದೆ. ಮೊದಲ ಹಂತದಲ್ಲಿ ಒಂದು ಬ್ಲಾಕ್‌ನಲ್ಲಿ ಫೆವಿಲಿಯನ್ ಬ್ಲಾಕ್ ನಿರ್ಮಿಸಲಾಗುವುದು ಎಂದರು. ಇನ್ನು ಚಿಂತಾಮಣಿಯಲ್ಲಿ ಸಿಂಥೆಟಿಕ್ ನಿರ್ಮಾಣಕ್ಕೆ 9 ಕೋಟಿ ಬಿಡುಗಡೆಯಾಗಿದೆ. ಜೊತೆಗೆ ಕ್ರೀಡಾಂಗಣಕ್ಕಾಗಿ 9 ಎಕರೆ ಜಾಗ ಗುರುತಿಸಲಾಗಿದೆ. ಗೌರಿಬಿದನೂರಿನ  ಒಳಾಂಗಣ ಕ್ರೀಡಾಂಗಣ ಅಭಿವೃದ್ಧಿ ಸೇರಿದಂತೆ ಜಿಲ್ಲೆಯ ಎಲ್ಲಾ ಕ್ರೀಡಾಂಗಣಗಳ ಅಭಿವೃದ್ಧಿಗೆ ಕ್ರಮಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

*******

11ನೇ ಕಾಮನ್ ವೆಲ್ತ್ ಸಂಸದೀಯ ಸಂಘ ಭಾರತ ವಲಯದ ಸಮ್ಮೇಳನ ಆಯೋಜಿಸಲು ಕರ್ನಾಟಕವನ್ನು ಆಯ್ಕೆ ಮಾಡಿದಕ್ಕಾಗಿ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ನಿನ್ನೆ ಹೊಸದಿಲ್ಲಿಯಲ್ಲಿ ಲೋಕಸಭಾಧ್ಯಕ್ಷ ಓಂ.ಬಿರ್ಲಾ ಅವರನ್ನು ಭೇಟಿ ಮಾಡಿ ಕೃತಜ್ಞತೆ ಸಲ್ಲಿಸಿದರು. ಬರುವ ಸೆಪ್ಟೆಂಬರ್ 9 ಮತ್ತು 10 ರಂದು ಸಮ್ಮೇಳನ ನಡೆಸಲು ತೀರ್ಮಾನಿಸಲಾಗಿದ್ದು, ಸಮ್ಮೇಳನದಲ್ಲಿ ಭಾರತದ ಎಲ್ಲಾ ರಾಜ್ಯಗಳ ಪೀಠಾಸೀನ ಅಧಿಕಾರಗಳು ಭಾಗವಹಿಸುವುದಲ್ಲದೇ ಪ್ರಪ್ರಥಮ ಬಾರಿಗೆ ಅಂತರಾಷ್ಟ್ರೀಯ ಮಟ್ಟದ ಕಾಮನ್ ವೆಲ್ತ್ ದೇಶಗಳ ಪೀಠಾಸೀನಾಧಿಕಾರಿಗಳನ್ನು ಆಹ್ವಾನಿಸುವ ಕುರಿತು ಮತ್ತು ಸಮ್ಮೇಳನದಲ್ಲಿ ಚರ್ಚಿಸಬೇಕಾದ ವಿ ಯಗಳ ಕುರಿತು ಸಮಾಲೋಚನೆ ನಡೆಸಿದರು.

*******

ಕನ್ನಡದಲ್ಲಿ ಬರುವ ಅರ್ಜಿ ಮತ್ತು ಪತ್ರಗಳಿಗೆ ಕಡ್ಡಾಯವಾಗಿ ಕನ್ನಡದಲ್ಲಿಯೇ ಉತ್ತರಿಸಬೇಕು ಎಂದು ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಸೂಚಿಸಿದ್ದಾರೆ. ಈ ಕುರಿತು ಸುತ್ತೋಲೆ ಹೊರಡಿಸಿರುವ ಅವರು, ಸರ್ಕಾರಿ ಕಛೇರಿಗಳ ನಾಮಫಲಕಗಳನ್ನು ಕನ್ನಡದಲ್ಲಿಯೇ ಪ್ರದರ್ಶಿಸಬೇಕು. ವಿಧಾನ ಮಂಡಲದ ಕಾರ್ಯಕಲಾಪಗಳು, ಪತ್ರ ವ್ಯವಹಾರ, ಗಮನ ಸೆಳೆಯುವ ಸೂಚನೆ ಇತ್ಯಾದಿಗಳು ಕಡ್ಡಾಯವಾಗಿ ಕನ್ನಡದಲ್ಲಿಯೇ ಸಲ್ಲಿಸುವಂತೆ ತಿಳಿಸಿದ್ದಾರೆ

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ತುರ್ತು ಪರಿಸ್ಥಿತಿ ಹೇರಲ್ಪಟ್ಟು ಐವತ್ತು ವರ್ಷಗಳು ಪೂರೈಸಿದ ಹಿನ್ನೆಲೆ, ಈ ದಿನವನ್ನು ನಿನ್ನೆ ದೇಶಾದ್ಯಂತ ಸಂವಿಧಾನ ಹತ್ಯಾ ದಿವಸ್ ಎಂದು ಆಚರಿಸಲಾಯಿತು. ತುರ್ತು ಪರಿಸ್ಥಿತಿ ಹೇರಿಕೆ, ಭಾರತದ ಪ್ರಜಾಪ್ರಭುತ್ವ ಇತಿಹಾಸದ ಅತ್ಯಂತ ಕರಾಳ ಅಧ್ಯಾಯಗಳಲ್ಲಿ ಒಂದು. ದಬ್ಬಾಳಿಕೆಯ ವಿರುದ್ಧ ಎದ್ದು ನಿಂತ ಪ್ರತಿಯೊಬ್ಬ ವ್ಯಕ್ತಿಗೂ ದೇಶ ವಂದಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಂವಿಧಾನ ಹತ್ಯಾ ದಿನ ಆಚರಿಸುತ್ತಿರುವ ಸಂದರ್ಭದಲ್ಲಿ ವಿಜಯನಗರ ಬಿಜೆಪಿ ಜಿಲ್ಲಾ ವಕ್ತಾರ

ಅಶೋಕ್ ಜಿರೆ, ತುರ್ತು ಪರಿಸ್ಥಿತಿಯ ಕರಾಳ ದಿನಗಳ ಕುರಿತು ತಮ್ಮ ನೆನಪುಗಳನ್ನು ಆಕಾಶವಾಣಿಯೊಂದಿಗೆ ಹಂಚಿಕೊಂಡಿದ್ದಾರೆ.

ಧ್ವನಿ– ಅಶೋಕ ಜಿರೆ– 46 ಸೆಕೆಂಡ್ಸ್

*******

ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 29 ರಂದು ಬೆಳಗ್ಗೆ 11 ಗಂಟೆಗೆ, ದೇಶ ವಿದೇಶಗಳ ಜನರೊಂದಿಗೆ ತಮ್ಮ ಅನಿಸಿಕೆ ಹಂಚಿಕೊಳ್ಳಲಿದ್ದಾರೆ. ಇದು ಮನದ ಮಾತು ಸರಣಿಯ 123 ನೇ ಆವೃತಿಯಾಗಿದೆ. ಜನತೆ ತಮ್ಮ ತಮ್ಮ ಸಲಹೆ ಹಾಗೂ ಅಭಿಪ್ರಾಯಗಳನ್ನು ನಮೋ ಆ್ಯಪ್ ಅಥವಾ My Gov.in ಜಾಲತಾಣದ ಮೂಲಕ ಹಂಚಿಕೊಳ್ಳಬಹುದು. ಅಲ್ಲದೆ, ಉಚಿತ ದೂರವಾಣಿ ಸಂಖ್ಯೆ 1800–11–7800ಗೆ ಕರೆ ಮಾಡಿ, ತಮ್ಮ ಸಂದೇಶವನ್ನು ತಿಳಿಸಬಹುದಾಗಿದೆ.

*******

ಬ್ಯಾಂಕಗಳಲ್ಲಿ ದೊರಕುವ ಸಾಲ–ಸೌಲಭ್ಯಗಳ ಕುರಿತು ಜನರಲ್ಲಿ ಅರಿವು ಮೂಡಿಸಬೇಕು ಎಂದು ಸಂಸದ ಡಾ. ಸಿ.ಎನ್.ಮಂಜುನಾಥ್ ಸೂಚಿಸಿದ್ದಾರೆ. ರಾಮನಗರದಲ್ಲಿ ನಿನ್ನೆ ಬ್ಯಾಂಕುಗಳ ಜಿಲ್ಲಾ ಸಲಹಾ ಸಮಿತಿ ಮತ್ತು ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬ್ಯಾಂಕ್‌ಗಳು ಕೃಷಿ, ವ್ಯಾಪಾರ ಸಾಲ, ಗೃಹ ಸಾಲ, ವಿದ್ಯಾಭ್ಯಾಸ ಸಾಲ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಬೇಕು ಎಂದು ಸೂಚನೆ ನೀಡಿದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ರಾಜ್ಯದ ಹಲವೆಡೆ ಭಾರಿ ಮಳೆ: ಕೆಲವೆಡೆ ಪ್ರವಾಹ ಭೀತಿ: ಎಡಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತ.

'ಕಾವೇರಿ ಆರತಿ'ಗೆ ಸಂಬಂಧಿಸಿದಂತೆ, ರೈತರು, ವಿವಿಧ ಭಾಗಿದಾರರೊಂದಿಗೆ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಭೆ.

ಚಿಕ್ಕಬಳ್ಳಾಪುರ ಜಿಲ್ಲಾ ಕ್ರೀಡಾಂಗಣದ ಸಮಗ್ರ ಅಭಿವೃದ್ಧಿಗೆ 69 ಕೋಟಿ ರೂಪಾಯಿ ಪ್ರಸ್ತಾವನೆ– ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್

ತುರ್ತು ಪರಿಸ್ಥಿತಿ ಹೇರಲ್ಪಟ್ಟು ಐವತ್ತು ವರ್ಷಗಳು ಪೂರೈಸಿದ ಹಿನ್ನೆಲೆ– ದೇಶಾದ್ಯಂತ ನಿನ್ನೆ ಸಂವಿಧಾನ ಹತ್ಯಾ ದಿವಸ್ ಆಚರಣೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

**********